ಇ) ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ಗ್ರಾಮಕ್ಕೆ ಕಸ್ತೂರಬಾ ಗಾಂಧಿ ವಸತಿ ಶಾಲೆ ಮಂಜೂರಾಗಿ ಕಟ್ಟಡ ಸಹ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಕಟ್ಟಡದ ಗುಣಮಟ್ಟ ತೀರ ಕಳಪೆಯಾಗಿರುವುದು ಹಾಗೂ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರವು ಯಾವ ಕ್ರಮ ಕೈಗೊಂಡಿದೆ, ಕೈಗೊಳ್ಳದಿದ್ದಲ್ಲಿ ಕಾರಣಗಳೇನು?

ಶ್ರೀ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು:

ಅ) ರಾಯಚೂರು ಜಿಲ್ಲೆಯಲ್ಲಿ 6 ಹಾಗೂ ಕೊಪ್ಪಳ ಜಿಲ್ಲೆಯಲ್ಲಿ 5 ಕಸ್ತೂರಬಾ ಗಾಂಧಿ ವಸತಿ ಶಾಲೆಗಳು ನಡೆಯುತ್ತಿವೆ.

ಆ) ರಾಯಚೂರು ಜಿಲ್ಲೆಯಲ್ಲಿ 2 ಶಾಲೆಗಳು ಸ್ವಂತ ಕಟ್ಟಡವಿದ್ದು, 4 ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುತ್ತದೆ.

ಕೊಪ್ಪಳ ಜಿಲ್ಲೆಯಲ್ಲಿ 1 ಶಾಲೆಗೆ ಸ್ವಂತ ಕಟ್ಟಡವಿದ್ದು, 4 ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ.

ಇ) ಹೌದು.

ಈ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಉದ್ಭವಿಸುವುದಿಲ್ಲ.

1081 ಶ್ರೀಮತಿ ಅನಿತಾ ಕುಮಾರಸ್ವಾಮಿ (ಮಧುಗಿರಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಧುಗಿರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಮತ್ತು ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ತಜ್ಞ ವೈದ್ಯರ ಸೇವೆಯನ್ನು ಸಮಾಲೋಚನೆ ಆಧಾರದ ಮೇಲೆ ನೇಮಾತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇದಕ್ಕಾಗಿ ಎನ್.ಆರ್.ಹೆಚ್.ಎಂ. ಯೋಜನೆಯಡಿ ರೂ. 25,000 ದಿಂದ ಗರಿಷ್ಠ ರೂ. 50,000ರವರೆಗೆ ಮಾಸಿಕ ಗೌರವಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 2008–09ನೇ ಸಾಲಿನಲ್ಲಿ 815 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ನೇಮಕಗೊಂಡಿದ್ದು, ಆ ಪೈಕಿ 685 ವೈದ್ಯರು ಕಾರ್ಯ ವರದಿ ಮಾಡಿಕೊಂಡರು. 130 ವೈದ್ಯರು ಕಾರ್ಯ ವರದಿ ಮಾಡಿಕೊಳ್ಳಲಿಲ್ಲ. ಒಟ್ಟಾರೆ 182 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಪ್ರಸ್ತುತ ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇಲಾಖೆಯಲ್ಲಿ ಒಟ್ಟು 5021 ವಿವಿಧ ವೃಂದದ ಅರೆ ವೈದ್ಯಕೀಯ ಸಿಬ್ಬಂದಿಯನ್ನು ವಿಶೇಷ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

1179 ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗೆ ಸೇರಿದ ಆಸ್ತಿಗಳಿಗೆ ಸಂಬಂಧಿಸಿದಂತೆ 2009ರಲ್ಲಿ ಕೋರ್ಟಿನಲ್ಲಿ ದಾಖಲಿಸಿದ ಪ್ರಕರಣಗಳು ಯಾವುವು; ವಿವರ ನೀಡುವುದು;

ಆ) ಬೆಂಗಳೂರಿನ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ವಿವಿಧ ಕೋರ್ಟ್‌ಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ಮತ್ತು ಅವುಗಳ ಬಗ್ಗೆ ಸರ್ಕಾರವು ಯಾವ ರೀತಿ ಕ್ರಮವನ್ನು ಕೈಗೊಂಡಿದೆ;

ಇ) ಇವುಗಳ ಪೈಕಿ ಎಷ್ಟು ಪ್ರಕರಣಗಳು "ಎಕ್ಸ್ ಪಾರ್ಟಿ" ಎಂದು ಘೋಷಿತವಾಗಿದೆ ಹಾಗೂ ಇದಕ್ಕೆ ಯಾರು ಕಾರಣರು?

ಪ್ರೊ. ಡಾ: ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಕರ್ನಾಟಕ ವಕ್ಫ್ ಸಂಸ್ಥೆಗೆ ಸೇರಿದಂತೆ, 2009ನೇ ಸಾಲಿನಲ್ಲಿ ದಾಖಲಾಗಿರುವ ಪ್ರಕರಣಗಳು, ಒಟ್ಟು 88. ವಿವರ ಅನುಬಂಧ–1ರಲ್ಲಿ ನೀಡಲಾಗಿದೆ.

ಆ) ಬೆಂಗಳೂರಿನಲ್ಲಿ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ಮಾನ್ಯ ವಿವಿಧ ನ್ಯಾಯಾಲಯಗಳಲ್ಲಿ 208 ಪ್ರಕರಣಗಳು ದಾಖಲಾಗಿವೆ. ವಿವರ ಇಂತಿದೆ:

1. ಮಾನ್ಯ ಉಚ್ಚನ್ಯಾಯಾಲಯದಲ್ಲಿ 74